ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-560012

ಸಂಖ್ಯೆ:ಪಪೂಶಿಇ/ಪರೀಕ್ಷೆ/ಇಪದಿ/21/2019-20 ದಿನಾಂಕ:18.05.2020

## ಸುತ್ತೋಲೆ

ವಿಷಯ: ಮಾರ್ಚ್ 2020ರ ದ್ವಿತೀಯ ಪಿ.ಯು.ಸಿ ಇಂಗ್ಲೀಷ್ ವಾರ್ಷಿಕ ಪರೀಕ್ಷೆಯ ದಿನಾಂಕವನ್ನು ಪ್ರಕಟಿಸುವ ಬಗ್ಗೆ.

ಉಲ್ಲೇಖ:ಸಂಖ್ಯೆ:ಪಪೂಶಿಇ/ಪರೀಕ್ಷೆ/ಇಮೂಸು/09/ಮಾರ್ಚ್2020 ದಿನಾಂಕ:22.03.2020

* * * * *

**NOVEL CORONA VIRUS (COVID-19)** ಸೋಂಕು ಹರಡುವುದನ್ನು ತಡೆಗಟ್ಟಲು ಮುಂಜಾಗ್ರತಾ ಕ್ರಮವಾಗಿ ದಿನಾಂಕ:23.03.2020 ರಂದು ನಡೆಯಬೇಕಿದ್ದ ಮಾರ್ಚ್ 2020ರ ದ್ವಿತೀಯ ಪಿ.ಯು.ಸಿ ಇಂಗ್ಲೀಷ್ ವಿಷಯದ ವಾರ್ಷಿಕ ಪರೀಕ್ಷೆಯನ್ನು ಉಲ್ಲೇಖಿತ ಸುತ್ತೋಲೆಯಂತೆ ಮುಂದೂಡಲಾಗಿತ್ತು.

ಪ್ರಸ್ತುತ ಕರ್ನಾಟಕ ಸರ್ಕಾರದ ನಿರ್ದೇಶನದ ಅನ್ವಯ ಪದವಿ ಪೂರ್ವ ಶಿಕ್ಷಣ ಇಲಾಖೆಯು ಮಾರ್ಚ್ 2020ರ ದ್ವಿತೀಯ ಪಿ.ಯು.ಸಿ ಇಂಗ್ಲೀಷ್ ವಿಷಯದ ವಾರ್ಷಿಕ ಪರೀಕ್ಷೆಯನ್ನು ಈ ಕೆಳಗಿನ ಪರಿಷ್ಕೃತ ವೇಳಾಪಟ್ಟಿಯಂತೆ ನಡೆಸಲಿದೆ.

**ಮಾರ್ಚ್ 2020ರ ದ್ವಿತೀಯ ಪಿ.ಯು.ಸಿ ಇಂಗ್ಲೀಷ್ ವಿಷಯದ ವಾರ್ಷಿಕ ಪರೀಕ್ಷೆಯ ಪರಿಷ್ಕೃತ ವೇಳಾಪಟ್ಟಿ:**

| ದಿನಾಂಕ | ದಿನ | ಸಮಯ | ವಿಷಯ |
|---|---|---|---|
| **18.06.2020** | ಗುರುವಾರ | ಬೆಳಿಗ್ಗೆ **10.15** ರಿಂದ **1.30** ರ ವರೆಗೆ | ಇಂಗ್ಲೀಷ್ |

ಪರಿಷ್ಕೃತ ವೇಳಾಪಟ್ಟಿಯ ಮಾಹಿತಿಯನ್ನು ಕೂಡಲೇ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳು ನಿಮ್ಮ ಜಿಲ್ಲಾ ವ್ಯಾಪ್ತಿಯಲ್ಲಿನ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು, ಉಪನ್ಯಾಸಕರು ಮತ್ತು ಬೋಧಕೇತರ ಸಿಬ್ಬಂದಿಗಳ ಮೂಲಕ ದ್ವಿತೀಯ ಪಿ.ಯು.ಸಿಗೆ ಹಾಜರಾಗುವ ಎಲ್ಲಾ ವಿದ್ಯಾರ್ಥಿಗಳಿಗೂ ಮಾಹಿತಿಯನ್ನು ತಲುಪುವಂತೆ ಮತ್ತು ಪರೀಕ್ಷಾ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಮಾಡಲು ಕ್ರಮವಹಿಸುವಂತೆ ಸೂಚಿಸಿದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ,

ಇವರಿಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಪ.ಪೂ.ಶಿ.ಇ. ಉಪನಿರ್ದೇಶಕರುಗಳಿಗೆ.
2. 2020ರ ಮಾರ್ಚ್ ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷಾ ಕೇಂದ್ರಗಳ ಪ್ರಾಂಶುಪಾಲರಿಗೆ.

ಪ್ರತಿಗಳು:

1. ಮಾನ್ಯ ಪ್ರಧಾನ ಕಾರ್ಯದರ್ಶಿಗಳ ಆಪ್ತಶಾಖೆ, ಪ್ರಾ&ಪ್ರೌ ಶಿಕ್ಷಣ ಇಲಾಖೆ.
2. ಜಂಟಿ ನಿರ್ದೇಶಕರು(ಪರೀಕ್ಷೆ), ಪ.ಪೂ.ಶಿ.ಇಲಾಖೆ, ಬೆಂಗಳೂರು.
3. ಕಛೇರಿ ಪ್ರತಿ.